1 58ನೇ ಪ್ರ ಮು (186)
4RR
01/04/26

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ: ಯತೀಂದ್ರ ಎಸ್. ಇವರು ನಿಯಮ 72ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಸತಿ ಯೋಜನೆ ಫಲಾನುಭವಿಗಳಿಗೆ ಈಗಾಗಲೇ ಖಾಲಿ ನಿವೇಶನ ಜಿಪಿಎಸ್ ಮಾಡಿದ್ದು, ಸದರಿ ನಿವೇಶನವು ಸರ್ವೆ ನಂ ವ್ಯಾಪ್ತಿಯಲ್ಲಿದ್ದು, ಹಾಲಿ ಜಾರಿಗೊಳಿಸಿರುವ ನಿಯಮಗಳಂತೆ ಇ-ಸ್ವತ್ತು ಸೃಜಿಸಲು ಅವಕಾಶವಿರುವುದಿಲ್ಲ. ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಈಗಾಗಲೇ ಇರುವ ಗ್ರಾಮಠಾಣಾ ಪ್ರದೇಶದಲ್ಲಿ ಸ್ಥಳಾವಕಾಶದ ಕೊರತೆಯಿದ್ದು, ಹೊಸದಾಗಿ ಆಯ್ಕೆಯಾಗುವ ವಸತಿ ಫಲಾನುಭವಿಗಳು ಸಹ ತಮ್ಮ ಕೃಷಿ ಭೂಮಿಯಲ್ಲಿಯೇ ಮನೆ ನಿರ್ಮಾಣ ಮಾಡಿಕೊಳ್ಳಬೇಕಾಗಿದೆ. ವಸತಿ ಯೋಜನೆಯಡಿ ಆಯ್ಕೆಯಾಗುವ ಫಲಾನುಭವಿಗಳಿಗೆ ಈ ಹಿಂದೆ ಇದ್ದಂತೆ ಎರಡು ಗುಂಟೆ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಮಾಡಿಕೊಳ್ಳಲು ಅವಕಾಶವಿತ್ತು. ಅದರಂತೆ ಕೃಷಿ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಳ್ಳುವ ವಸತಿ ಯೋಜನೆ ಫಲಾನುಭವಿಗಳಿಗೆ ಇ-ಸ್ವತ್ತು ಸೃಜಿಸಿ ಮನೆ ನಿರ್ಮಾಣ ಮಾಡಿಕೊಳ್ಳಲು ಅವಕಾಶ ಕಲ್ಪಿಸಿಕೊಡುವ ಬಗ್ಗೆ.

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ಅನ್ನು ದಿನಾಂಕ: 07.04.2025 ರಂದು ಅಧಿಸೂಚಿಸಲಾಗಿದ್ದು, ಪ್ರಕರಣ 199 ಕ್ಕೆ ಹೊಸದಾಗಿ ಪ್ರಕರಣ 199ಬಿ ಮತ್ತು 199ಸಿ ಗಳನ್ನು ಅಧಿಸೂಚಿಸಲಾಗಿರುತ್ತದೆ.

ಪ್ರಕರಣ 199ಬಿ ಅನ್ವಯ ಅಧಿಸೂಚನೆ ದಿನಾಂಕ:07.04.2025 ರ ನಂತರ ಗ್ರಾಮ ಪಂಚಾಯಿತಿಗಳು ಹೊಸ ಖಾತಾ ಅಥವಾ ಪಿ.ಐ.ಡಿ.ಯನ್ನು ನೀಡಬೇಕಾದರೆ ಗ್ರಾಮ ಪಂಚಾಯಿತಿ ಅಧಿಕಾರ ವ್ಯಾಪ್ತಿಯ ಯೋಜನಾ ಪ್ರಾಧಿಕಾರದ ಮೂಲಕ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961 ರ ಉಪಬಂಧಗಳನ್ವಯ ಲೇಔಟ್ ಪ್ಲಾನಿಗಾಗಿ ಪೂರ್ವಾನುಮೋದನೆಯನ್ನು ಪಡೆದುಕೊಳ್ಳತಕ್ಕದ್ದು ಎಂದು ಅಧಿಸೂಚಿಸಲಾಗಿರುತ್ತದೆ.

ದಿನಾಂಕ: 07.04.2025ರ ಪೂರ್ವದಲ್ಲಿ ಕೃಷಿ ಭೂಮಿಯಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರನ್ವಯ ಅನುಬಂಧ-2 ರಲ್ಲಿರುವ ದಾಖಲೆಗಳನ್ನು ಪಡೆದು ನಮೂನೆ 11ಬಿ ಅನ್ನು ಸಾರ್ವಜನಿಕರು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.

ದಿನಾಂಕ: 07.04.2025ರ ನಂತರದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025ರ ಪ್ರಕರಣ 199ಬಿ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025ರನ್ವಯ ಕಡ್ಡಾಯವಾಗಿ ಭೂ ಪರಿವರ್ತನೆ ಹಾಗೂ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961 ರ ಉಪಬಂಧಗಳನ್ವಯ ಅನುಮೋದನೆ ಪಡೆದಿರುವ ಆಸ್ತಿಗಳಿಗೆ ನಮೂನೆ ಸೃಜಿಸಲಾಗುವುದು.

**ಸಂಖ್ಯೆ:**RDPR 357 GPA 2026.

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.